# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103
ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ:ಖ.ಕೋ:2023-24/12128 ದಿನಾಂಕ:13.09.2023.

## ದರಪಟ್ಟಿ ಆಹ್ವಾನ (ವಿ.ವಿ.ವೆಬ್‌ಸೈಟ್)

ವಿಷಯ: ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ಸ್ನಾತಕ ಸೂಕ್ಷ್ಮಜೀವಶಾಸ್ತ್ರವಿಭಾಗದ ಪ್ರಯೋಗಾಲಯಕ್ಕೆ ಅಗತ್ಯವಿರುವ ಉಪಕರಣಗಳನ್ನು ಸರಬರಾಜು ಮಾಡಲು ದರಪಟ್ಟಿಗಳನ್ನು ಆಹ್ವಾನಿಸಿರುವ ಕುರಿತು.

ಉಲ್ಲೇಖ: 1. ಮುಖ್ಯಸ್ಥರು, ಸ್ನಾತಕ ಸೂಕ್ಷ್ಮಜೀವಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಇವರ ಪತ್ರ ದಿನಾಂಕ:05.07.2023.

2. 24ನೇ ಖರೀದಿ ಸಮಿತಿ ಸಭೆಯ ನಿರ್ಣಯ ದಿನಾಂಕ:22.08.2023.
3. ವಿ.ವಿ ಅಧಿಸೂಚನೆ ಪತ್ರದ ಸಂಖ್ಯೆ: ತುವಿತು:ಕೆ.ಟಿ.ಪಿ.ಪಿ/ತಿ.ಪ/ಖ.ಕೋ/2022-23/9035 ದಿನಾಂಕ: 09.09.2022
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:06.09.2023.(ಕಂಡಿಕೆ-29)

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಬೇಡಿಕೆಯನುಸಾರ ಉಲ್ಲೇಖ(2)ರ ಖರೀದಿ ಸಮಿತಿ ಸಭೆಯ ನಿರ್ಣಯದನ್ವಯ ಉಲ್ಲೇಖ(3)ರ ಆದೇಶದ ಮೇರೆಗೆ ಕರ್ನಾಟಕ ಪಾರದರ್ಶಕತೆ ಅಧಿನಿಯಮ 2000ರ ತಿದ್ದುಪಡಿ 4(i)(ii) ರ ನಿಯಮದನ್ವಯ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ಸ್ನಾತಕ ಸೂಕ್ಷ್ಮಜೀವಶಾಸ್ತ್ರ ವಿಭಾಗದ ಪ್ರಯೋಗಾಲಯಕ್ಕೆ ಅಗತ್ಯವಿರುವ ಪ್ರಯೋಗಾಲಯ ಉಪಕರಣಗಳನ್ನು ಸರಬರಾಜು ಪಡೆಯಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ನೋಂದಾಯಿತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| Sl. No | Name of the Equipment | Required Quantity | Rate to be quoted per quantity. (Inclu. All taxes) |
|---|---|---|---|
| 01 | **Digital pH Meter - Elico**<br>▪ Voltage:100-200VDC<br>▪ Driven Type; Electric<br>▪ Features: Auto Controller, High Performance<br>▪ Temperature: -25 +85deg C, -40 +70 deg C | 1 | |
| 02 | **Elctronic weighing balance - Essae**<br>Usage/Application: Laboratory<br>Brand: Name/Number: PGB200<br>Size: 80 mm, Capacity: 200 gram, Accuracy:. 1 mg | 1 | |
| 03 | **UV-Transilluminator - Biotech**<br>Biotech R & D | 1 | |
| 04 | **Refrigerator - LG/Samsung**<br>300 lts | 2 | |
| 05 | **Micropipettes - Torsons**<br>10-20 Ml, 100-200 Ml, 100-1000 Ml | 3 | |
| 06 | **SDS-PAGE- BIO-RAD** | 1 | |

**ಷರತ್ತು ಮತ್ತು ನಿಬಂಧನೆಗಳು:**

1. ಮುಚ್ಚಿದ ಲಕೋಟೆಯ ಮೇಲೆ "ವಿ.ವಿ.ವಿಜ್ಞಾನ ಕಾಲೇಜಿನ ಸ್ನಾತಕ ಸೂಕ್ಷ್ಮಜೀವಶಾಸ್ತ್ರ ವಿಭಾಗದ ಪ್ರಯೋಗಾಲಯಕ್ಕೆ ಅವಶ್ಯವಿರುವ ಉಪಕರಣಗಳ ಸರಬರಾಜಿಗಾಗಿ ದರಪಟ್ಟಿ" ಎಂದು ನಮೂದಿಸತಕ್ಕದ್ದು.
2. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ:22.09.2023.ಪೂರ್ವಾಹ್ನ 12.30
3. ದರಪಟ್ಟಿಯನ್ನು ದಿನಾಂಕ:22.09.2023. ರಂದು ಅಪರಾಹ್ನ 4.30ಕ್ಕೆ ತೆರೆಯಲಾಗುವುದು.

4. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, **ತುಮಕೂರು-572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
5. ತಮ್ಮ ದರಪಟ್ಟಿಯಲ್ಲಿ ಪ್ರತಿ ಸಾಮಗ್ರಿವಾರು ದರಗಳನ್ನು ನಮೂದಿಸುವುದು. (ಎಲ್ಲಾ ತೆರಿಗೆ ಮತ್ತು ಸರಬರಾಜು ವೆಚ್ಚ ಒಳಗೊಂಡಿರತಕ್ಕದ್ದು.)
6. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳವರೆಗೆ ಚಾಲ್ತಿಯಲ್ಲಿರುತ್ತದೆ.
7. ಸದರಿ ದರಪಟ್ಟಿಯು ಒಂದು ಲಕ್ಷ ಮೀರಿದ ಸಾಮಗ್ರಿಗಳು/ಸೇವೆಗಳಿಗೆ ಸಂಬಂಧಿಸಿರುವುದರಿಂದ ಸದರಿ ಸೇವೆಗೆ ಕೆ.ಟಿ.ಪಿ.ಪಿ ನಿಯಮಾನುಸಾರ ರೂ. 5000/- ಗಳ ಇ.ಎಂ.ಡಿ ಮೊತ್ತವಾಗಿ Banker's guarantee / Demand Draft / Pay Order/FDR/Cheque in favor of "Finance Officer, Tumkur University" payable at Tumakuru ಇವರಿಗೆ ದರಪಟ್ಟಿಯೊಂದಿಗೆ ಸಲ್ಲಿಸತಕ್ಕದ್ದು.
8. ಇಎಂಡಿ ವಿನಾಯಿತಿ ಕೋರಿದ್ದಲ್ಲಿ NSIC/MSME ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.
9. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
10. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ಅಧಿಕೃತ ಮಾರಾಟಗಾರರು/ಸರಬರಾಜುದಾರರು/ತಯಾರಕರು ಆಗಿದ್ದಲ್ಲಿ ದಾಖಲೆಗಳನ್ನು ಲಗತ್ತಿಸುವುದು.
11. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
12. ದರಪಟ್ಟಿಯಲ್ಲಿ ನಮೂದಿಸಿರುವ ಉಪಕರಣಗಳ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
13. **ದರಪಟ್ಟಿಯನ್ನು ಅಂಗೀಕರಿಸುವಾಗ ಸಂಸ್ಥೆಗಳು ಸಲ್ಲಿಸಿದ ದರಪಟ್ಟಿಗಳಲ್ಲಿನ ಉಪಕರಣವಾರು ಅತೀ ಕಡಿಮೆ ದರಗಳನ್ನು ವಿಶ್ವವಿದ್ಯಾನಿಲಯವು ಪರಿಗಣಿಸಲಾಗುವುದು.**
14. ತಮ್ಮ ಸಂಸ್ಥೆಯು ಸರಬರಾಜು ಮಾಡಲು ಉದ್ದೇಶಿಸಿರುವ ಪ್ರಯೋಗಾಲಯದ ಉಪಕರಣಗಳ ಸಂರಚನೆಗಳಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಗಳ ಮಾಹಿತಿ/ಮಾದರಿ ಸಂಖ್ಯೆಗಳನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
15. ಷರತ್ತು ಬದ್ದ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
16. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
17. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
18. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

Mangalahowri H

ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ,
ತುಮಕೂರು

ಪ್ರತಿಗಳು:

1. ಮುಖ್ಯಸ್ಥರು, ಸ್ನಾತಕ ಸೂಕ್ಷ್ಮಜೀವಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
4. ಕಚೇರಿ ಪ್ರತಿ.